**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಎಲ್.ಅನಿಲ್ ಕುಮಾರ್ ಇವರು ನಿಯಮ-72ರಡಿ ಗಮನ ಸೆಳೆದಿರುವ ಸೂಚನೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಹೇಳಿಕೆ.**

**ಪ್ರಶ್ನೆ:**

ಕೋಲಾರ ಜಿಲ್ಲೆಯ ಕ್ಯಾಸಂಬಳ್ಳಿ ಗ್ರಾಮದವರಾದ ಕರ್ನಾಟಕ ರಾಜ್ಯದ ಪ್ರಥಮ ಮುಖ್ಯಮಂತ್ರಿಗಳಾದ ಶ್ರೀ ಕೆ. ಚೆಂಗಲರಾಯ ರೆಡ್ಡಿ ರವರು ಕರ್ನಾಟಕ ರಾಜ್ಯದ ಅಭಿವೃದ್ಧಿಗೆ ಇವರು ನೀಡಿದ ಕೊಡುಗೆಗಾಗಿ ಇವರನ್ನು ಗೌರವಪೂರ್ವಕವಾಗಿ ಸ್ಮರಿಸಲಾಗುತ್ತಿದ್ದು, ಸದರಿಯವರ ಪುತ್ಥಳಿ / ಪ್ರತಿಮೆಯನ್ನು ವಿಧಾನಸೌಧದಲ್ಲಿ ಅಥವಾ ಕೋಲಾರ ಜಿಲ್ಲಾಕೇಂದ್ರದಲ್ಲಿ ನಿರ್ಮಿಸುವಂತೆ ಮಾನ್ಯ, ಮುಖ್ಯಮಂತ್ರಿಗಳ ಗಮನಸೆಳೆಯುವ ಬಗ್ಗೆ.

**ಹೇಳಿಕೆ:**

ಕರ್ನಾಟಕ ರಾಜಕೀಯ ಚರಿತ್ರೆಯಲ್ಲಿ ಉತ್ತಮ ಶ್ರೇಣಿಗೆ ಸೇರುವ ನಾಯಕರ ಪಟ್ಟಿಯಲ್ಲಿ ಮುಖ್ಯವಾಗಿ ದಿವಂಗತ ಮಾಜಿ ಮುಖ್ಯಮಂತ್ರಿ ಶ್ರೀ ಕ್ಯಾಸಂಬಳ್ಳಿ ಚೆಂಗಲರಾಯ ರೆಡ್ಡಿ ಇವರ ಹೆಸರನ್ನು ಉಲ್ಲೇಖಿಸಬಹುದಾಗಿದ್ದು ಶ್ರೀಯುತರು ಅಪ್ರತಿಮ ಸ್ವಾತಂತ್ರ್ಯ ಹೋರಾಟಗಾರರಿಗೆ, ಅಂದಿನ ಮೈಸೂರು ರಾಜ್ಯದ ಮೊದಲ ಮುಖ್ಯಮಂತ್ರಿಯಾಗಿ ಕೇಂದ್ರ ಸಚಿವರಾಗಿ, ಮಧ್ಯಪ್ರದೇಶ ರಾಜ್ಯದ ರಾಜ್ಯಪಾಲರಾಗಿ ಸುದೀರ್ಘ ಕಾಲ ರಾಜಕೀಯದಲ್ಲಿ ಸೇವೆಯನ್ನು ಸಲ್ಲಿಸಿರುತ್ತಾರೆ.

ಕರ್ನಾಟಕ ರಾಜ್ಯದ ಪ್ರಥಮ ಮುಖ್ಯಮಂತ್ರಿಯವರಾದ ಶ್ರೀ ಕೆ. ಚೆಂಗಲರಾಯ ರೆಡ್ಡಿ ರವರ ಕಂಚಿನ ಪ್ರತಿಮೆಯನ್ನು ದಿನಾಂಕ:23.02.2023ರಂದು ಬೆಂಗಳೂರಿನ ವಿಧಾನಸೌಧದ ಆವರಣದಲ್ಲಿ ಅನಾವರಣ ಮಾಡಲಾಗಿರುತ್ತದೆ.

ಸಂಖ್ಯೆ: ಕಸಂವಾ 09 ಕವಿಸ 2026

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು